# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ದಿನಾಂಕ:- 05-02-2022 ರಂದು ಬೆಳಗ್ಗೆ:- 11.30 ಗಂಟೆಗೆ ಶ್ರೀ. ಶ್ರೀ ಶಿವಕುಮಾರ ಸ್ವಾಮೀಜಿ ಸಾರ್ವಜನಿಕ ಸೇವಾ ಸಂಕೀರ್ಣ ವಾರ್ಡ್ ಸಂಖ್ಯೆ 126 ಮಾರುತಿಮಂದಿರದಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.**

ಬಿ.ಬಿ.ಎಂ.ಪಿ ವ್ಯಾಪ್ತಿಯಲ್ಲಿ ಸಾರ್ವಜನಿಕರಿಗೆ ಪರಿಣಾಮಕಾರಿಯಾಗಿ ಸೇವೆಗಳನ್ನು ಒದಗಿಸುವ ನಿಟ್ಟಿನಲ್ಲಿ ಪಾಲಿಕೆಯ ವಾರ್ಡ್ ಹಂತದಲ್ಲಿ ಸಮಿತಿಗಳನ್ನು ರಚಿಸುವ ಸಲುವಾಗಿ ಮಾನ್ಯ ಆಯುಕ್ತರು, ಬಿ.ಬಿ.ಎಂ.ಪಿ ರವರ ಕಛೇರಿ ಆದೇಶದ ಸಂಖ್ಯೆ:ಬಿ12(5)/ಪಿ.ಆರ್/35/2020-21/21-09-2020ರ ಆದೇಶದಂತೆ ನೋಡೆಲ್ ಅಧಿಕಾರಿಯನ್ನಾಗಿ ಶ್ರೀ. ಜಯಶಂಕರ್ ರೆಡ್ಡಿ, ಕಾರ್ಯಪಾಲಕ ಅಭಿಯಂತರರು, ರಸ್ತೆ ಮೂಲಸೌಕರ್ಯ, ಮಹದೇವಪುರ ವಿಭಾಗ, ಬಿ.ಬಿ.ಎಂ.ಪಿ ರವರನ್ನು ನೇಮಿಸಲಾಗಿದ್ದು, ಸದರಿ ಆದೇಶದಂತೆ ವಾರ್ಡ್ ಮಟ್ಟದಲ್ಲಿ ಸಾರ್ವಜನಿಕರಿಗೆ ಪ್ರಮುಖವಾದ ಮೂಲಭೂತ ಸೌಕರ್ಯಗಳಾದ ಘನತ್ಯಾಜ್ಯ ನಿರ್ವಹಣೆ, ನೀರು ಸರಬರಾಜು ಮತ್ತು ಒಳಚರಂಡಿ ಮತ್ತು ಇನ್ನಿತರ ಕಲ್ಯಾಣ ಕಾರ್ಯಕ್ರಮಗಳಂತಹ ಹಲವಾರು ಸೌಲಭ್ಯಗಳನ್ನು ಪರಿಣಾಮಕಾರಿಯಾಗಿ ಒದಗಿಸುವ ನಿಟ್ಟಿನಲ್ಲಿ ಮತ್ತು ಪಾಲಿಕೆಯ ಹಾಗೂ ಸಾರ್ವಜನಿಕರ ನಡುವೆ ಸಮನ್ವಯ ಸಾದಿಸುವ ನಿಟ್ಟಿನಲ್ಲಿ ಪಾಲಿಕೆಯ ವಾರ್ಡ್ ಹಂತದಲ್ಲಿ ಸಮಿತಿ ಸಭೆಗೆ ಈ ಕೆಳಕಂಡ ಅಧಿಕಾರಿ ವರ್ಗ/ಸದಸ್ಯರು ಮತ್ತು ಸ್ಥಳೀಯ ನಾಗರೀಕರು ಹಾಜರಾಗಿದ್ದರು.

**ಸಭೆಗೆ ಹಾಜರಿದ್ದ ಅಧಿಕಾರಿಗಳು ಮತ್ತು ಸದಸ್ಯರು:-**

| ಕ್ರ. ಸಂ | ಹೆಸರು | ಮೊಬೈಲ್ ಸಂಖ್ಯೆ |
|---|---|---|
| 1 | ನೋಡೆಲ್ ಅಧಿಕಾರಿ: ಶ್ರೀ. ಜಯಶಂಕರ್ ರೆಡ್ಡಿ, ಕಾರ್ಯಪಾಲಕ ಅಭಿಯಂತರರು, ರಸ್ತೆ ಮೂಲಸೌಕರ್ಯ, ಮಹದೇವಪುರ ವಿಭಾಗ, ಬಿ.ಬಿ.ಎಂ.ಪಿ. | 9741697632 |
| 2 | ಕಾರ್ಯದರ್ಶಿ ಮತ್ತು ಸಂಚಾಲಕರು<br>ಶ್ರೀ. ರವಿರಾಜ್ ಎಸ್. ಪಿ, ಸಹಾಯಕ ಅಭಿಯಂತರರು, ವಾರ್ಡ್ ನಂ.126 | 9980764000 |
| 3 | ಶ್ರೀ. ತಿಮ್ಮಪ್ಪ, RI- Ward no.126, Maruthimandira. | 9480685657 |
| 4 | ಶ್ರೀ. ಲಕ್ಷ್ಮಿ ನರಸಿಂಹಯ್ಯ, ತೋಟಗಾರಿಕೆ ಅಧಿಕಾರಿ, ಚಂದ್ರಾಬಡಾವಣೆ. | 9845257299 |
| 5 | ಶ್ರೀ. ರಂಗದಾಮಯ್ಯ, ಕಾರ್ಯ ನಿರ್ವಾಹಕರು, ಮಾರುತಿಮಂದಿರ. | 9880376090 |
| 6 | ಶ್ರೀ. ರಾಹುಲ್ ರಾಠೋಡ್, AE (BWSSB), ChandraLayout. | 7026266677 |
| 7 | ಶ್ರೀ. ನಾಗಶೆಟ್ಟಿ ಪಿ, Senior veterinary Inspector, ChandraLayout. | 9480683055 |
| 8 | ಶ್ರೀ. ಹೇಮಾವತಿ, ಎಚ್.ಜಿ, Senior Health Inspector, ChandraLayout. | 9480484746 |
| 9 | ಶ್ರೀ. ಶ್ರೀನಿವಾಸ್, (ASI – Vijayanagara Traffic) | 8050741006 |
| 10 | ಶ್ರೀ. ಸೋಮಶೇಖರ. ಎನ್– ಜೂನಿಯರ್ ಇಂಜಿನಿಯರ್ (ಬೆಸ್ಕಾಂ) | |
| 11 | ಶ್ರೀಮತಿ. ರೇವತಿ. ಎಮ್– (RWA – Shivanandanagara)- ಸದಸ್ಯರು | 9632112539 |
| 12 | ಶ್ರೀ. ಶಿವಶಂಕರ್. ಎ. ಎಂ.– (RWA – Vinayaka Layout)- ಸದಸ್ಯರು | 9448055204 |
| 13 | ಶ್ರೀ. ಎ.ಎಸ್.ವಿ. ಪ್ರಸಾದ್ –ಸದಸ್ಯರು. | 8277335854 |
| 14 | ಶ್ರೀ. ರಾಮನಾಥ್ ಶೆಟ್ಟಿ– (RWA – Vinayaka Layout)- ಸದಸ್ಯರು | 9741333900 |
| 15 | ಶ್ರೀ. ಟಿ. ರಾಮು, (RWA – MRCR Layout)- ಸದಸ್ಯರು | 9900709101 |

*****

ದಿನಾಂಕ: 05–02–2022 ರಂದು ಬೆಳಿಗ್ಗೆ 11.30 ಗಂಟೆಗೆ ನಡೆಸಲಾದ ವಾರ್ಡ್ ಮಟ್ಟದ ಸಾರ್ವಜನಿಕರ ಕುಂದು ಕೊರತೆಗಳನ್ನು ನಿವಾರಿಸುವ ನಿಟ್ಟಿನಲ್ಲಿ ಮತ್ತು ಅಭಿವೃದ್ಧಿ ಕಾಮಗಾರಿಗಳನ್ನು ನಿರ್ವಹಿಸುವ ಸಂಬಂಧ ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಲಾಗಿ ಮೊದಲಿಗೆ ಹಾಜರಿದ್ದ, ಅಧ್ಯಕ್ಷರಿಗೆ ಸ್ವಾಗತವನ್ನು ಕೋರುತ್ತಾ ಹಾಗೂ ಸಭೆಗೆ ಹಾಜರಾದ ಎಲ್ಲಾ ಇಲಾಖೆಯ ಅಧಿಕಾರಿ ವರ್ಗದವರಿಗೆ ಮತ್ತು ಸ್ಥಳೀಯ ಸದಸ್ಯರು ಮತ್ತು ನಾಗರಿಕರಿಗೆ ಸ್ವಾಗತವನ್ನು ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

**ಚರ್ಚಿಸಲಾದ ವಿಷಯಗಳ ವಿವರಗಳು:–**

1. ಶ್ರೀ. ಶಿವಶಂಕರ್. ಎ. ಎಂ. (RWA – Vinayaka Layout)- ಸದಸ್ಯರು ರವರು ಮಾತನಾಡುತ್ತಾ,
   - ವಾರ್ಡ್‌ನ ವ್ಯಾಪ್ತಿಯಲ್ಲಿ ಸಾರ್ವಜನಿಕರು ಓಡಾಡುವ ರಸ್ತೆ ಹಾಗೂ ಪಾದಚಾರಿ ಮಾರ್ಗಗಳ ಮೇಲೆ 4 ವೀಲ್‌ಗಳ ವಾಹನಗಳನ್ನು ಪಾರ್ಕಿಂಗ್ ಮಾಡಿರುವುದನ್ನು ತೆರವುಗೊಳಿಸುವ ಬಗ್ಗೆ.

     **ಕ್ರಮ:** ಶ್ರೀ. ಶ್ರೀನಿವಾಸ್. (ASI – Vijayanagara Traffic)- (Ph.No: 8050741006)

2. ಶ್ರೀ. ರಾಮನಾಥ್ ಶೆಟ್ಟಿ. 4ನೇ ಮುಖ್ಯರಸ್ತೆ, ವಿನಾಯಕ ಬಡಾವಣೆ– ಸಾರ್ವಜನಿಕರು ರವರು ಮಾತನಾಡುತ್ತಾ,
   - 4ನೇ ಮುಖ್ಯರಸ್ತೆ, ವಿನಾಯಕ ಬಡಾವಣೆಯಲ್ಲಿ ಪಾದಚಾರಿ ಮಾರ್ಗದಲ್ಲಿ ವಾಹನ ನಿಲುಗಡೆ ಮಾಡಿದ್ದು, ಗುಜರಿ ಅಂಗಡಿ ವಸ್ತುಗಳನ್ನು ಮನೆಯ ಕಾಂಪೌಂಡ್‌ಗೆ ಸೇರಿದಂತೆ ಸಂಗ್ರಹಿಸಿದ್ದು ಇದರಿಂದ ಸುತ್ತಮುತ್ತಲಿನ ನಿವಾಸಿಗಳಿಗೆ ತೊಂದರೆಯಾಗುತ್ತಿರುವ ಬಗ್ಗೆ.

     **ಕ್ರಮ:** ಸಭೆಯಲ್ಲಿ ಹಾಜರಿದ್ದ ಶ್ರೀ. ಶ್ರೀನಿವಾಸ್ (ಎ.ಎಸ್.ಐ–ವಿಜಯನಗರ ಟ್ರಾಫಿಕ್)ರವರು ನಿಲುಗಡೆಗೊಳಿಸಲಾಗಿರುವ ವಾಹನಗಳು ಮತ್ತು ಸ್ಥಳದ ವಿವರಗಳನ್ನು ಲಿಖಿತವಾಗಿ ಕಂಪ್ಲೆಂಟ್ ನೀಡಿದಲ್ಲಿ ಕ್ರಮ ಜರುಗಿಸಲಾಗುವುದು ಎಂದು ಸಭೆಗೆ ತಿಳಿಸಿದರು.

3. ಶ್ರೀಮತಿ. ರೇವತಿ - ಸದಸ್ಯರು ರವರು ಮಾತನಾಡುತ್ತಾ,
   - ಶಿವಾನಂದನಗರ 4ನೇ ಅಡ್ಡರಸ್ತೆಯಲ್ಲಿ ಕಸವನ್ನು ರಸ್ತೆಗಳ ಮೇಲೆ ಹಾಗೂ ಮೋರಿಗಳಲ್ಲಿ ಸುರಿಯುತ್ತಿರುವ ಬಗ್ಗೆ ಸಭೆಯಲ್ಲಿ ಪ್ರಸ್ತಾಪಿಸಿದರು.

     **ಕ್ರಮ:** ಸಹಾಯಕ ಕಾರ್ಯಪಾಲಕ ಅಭಿಯಂತರರು, ಎಸ್.ಡಬ್ಲ್ಯೂ.ಎಮ್. (Ph.No: 9538202886 ) ಮತ್ತು ಕಿರಿಯ ಆರೋಗ್ಯ ಪರಿವೀಕ್ಷಕರು, ಚಂದ್ರಾಬಡಾವಣೆ. (Ph.No: 9480484746).

4. ಶ್ರೀ. ಎ.ಎಸ್.ವಿ ಪ್ರಸಾದ್ - ಸದಸ್ಯರು ರವರು ಮಾತನಾಡುತ್ತಾ,
   - ಕೆನರಾಬ್ಯಾಂಕ್ ಕಾಲೋನಿ 4ನೇ ಮುಖ್ಯರಸ್ತೆ, 2ನೇ ಅಡ್ಡರಸ್ತೆ ಬೀದಿ ದೀಪಗಳು ಹಾಳಾಗಿದ್ದು ಇದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದರಿಂದ ಬೀದಿ ದೀಪವನ್ನು ಸರಿಪಡಿಸಲು ತಿಳಿಸಿದರು.

     **ಕ್ರಮ:** ಸಹಾಯಕ ಕಾರ್ಯಪಾಲಕ ಅಭಿಯಂತರರು, Electrical (West) BBMP.

5. ಶ್ರೀ. ರಾಮು. ಟಿ -(RWA – MRCR Layout) ಸದಸ್ಯರು ರವರು ಮಾತನಾಡುತ್ತಾ,

- ಜಿ.ಕೆ.ಡಬ್ಲ್ಯೂ ಬಡಾವಣೆ RWA ಕಟ್ಟಡದಲ್ಲಿ ಟೈಲರಿಂಗ್ ಸೆಂಟರ್, ಯೋಗ ಸೆಂಟರ್ ಮತ್ತು ಅಸೋಸಿಯೇಷನ್ ಇರುವುದರಿಂದ ಕಟ್ಟಡಕ್ಕೆ ಬೀಗ ಹಾಕದೇ ಇರುವುವ ಕಾರಣ ಅನೈತಿಕ ಚಟುವಟಿಕೆಗಳು ನಡೆಯುವ ಸಾಧ್ಯತೆ ಇರುತ್ತದೆ ಹಾಗಾಗಿ ಸದರಿ ಕಟ್ಟಡಕ್ಕೆ ಬೀಗ ಹಾಕಲು ಸಭೆಯಲ್ಲಿ ತಿಳಿಸಿದರು.

  **ಕ್ರಮ:** ಸಹಾಯಕ ಕಾರ್ಯಪಾಲಕ ಅಭಿಯಂತರರು, ಎಸ್.ಡಬ್ಲ್ಯೂ.ಎಮ್. (Ph.No: 9538202886 ) ಮತ್ತು ಕಿರಿಯ ಆರೋಗ್ಯ ಪರಿವೀಕ್ಷಕರು, ಚಂದ್ರಾಬಡಾವಣೆ. (Ph.No: 9480484746).

ಈ ಸಂಬಂಧ ಸೂಕ್ತ ಕ್ರಮ ಕೈಗೊಳ್ಳಲು ಸಂಬಂಧ ಪಟ್ಟ ಇಲಾಖೆಗೆ ತಿಳಿಸಲು ನೋಡೆಲ್ ಅಧಿಕಾರಿಗಳು ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್ ನಂ.126 ರವರಿಗೆ ಸೂಚಿಸಲಾಯಿತು.

ಈ ಮೇಲ್ಕಂಡ ಎಲ್ಲಾ ವಿಷಯಗಳನ್ನು ಹಾಗೂ ಸಮಸ್ಯೆಗಳನ್ನು ಬರುವ ಮುಂದಿನ ಸಭೆಯೊಳಗಾಗಿ ನಿವಾರಣೆ ಮಾಡಿ ಅನುಪಾಲನೆ ವರದಿಯನ್ನು ಸಂಬಂದಪಟ್ಟ ಅಧಿಕಾರಿಗಳು ಕಳುಹಿಸಿಕೊಡಬೇಕಾಗಿ ಈ ಮೂಲಕ ಸೂಚಿಸುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿ ಮತ್ತು ಸಂಚಾಲಕರು
ವಾರ್ಡ್ ಸಂಖ್ಯೆ.126

ವಾರ್ಡ್ ನೋಡಲ್ ಅಧಿಕಾರಿ
ವಾರ್ಡ್ ಸಂಖ್ಯೆ.126

ಪ್ರತಿಯನ್ನು:

8) ಮಾನ್ಯ ಆಯುಕ್ತರು ರವರ ಅವಗಾಹನೆಗೆ ಸಲ್ಲಿಸಲು ಆಪ್ತ ಕಾರ್ಯಾಲಯಕ್ಕೆ ಸಲ್ಲಿಸಿದೆ.
9) ಮಾನ್ಯ ವಿಶೇಷ ಆಯುಕ್ತರು (ಯೋಜನೆ) ರವರ ಅವಗಾಹನೆಗೆ ಸಲ್ಲಿಸಿದೆ.
10) ಮಾನ್ಯ ವಿಶೇಷ ಆಯುಕ್ತರು (ಘನತ್ಯಾಜ್ಯ) ರವರ ಅವಗಾಹನೆಗೆ ಸಲ್ಲಿಸಿದೆ.
11) ಜಂಟಿ ಆಯುಕ್ತರು (ಪಶ್ಚಿಮ) ರವರ ಅವಗಾಹನೆಗೆ ಸಲ್ಲಿಸಿದೆ.
12) ಮುಖ್ಯಅಭಿಯಂತರರು (ಪಶ್ಚಿಮ) ರವರ ಅವಗಾಹನೆಗೆ ಸಲ್ಲಿಸಿದೆ.
13) ಅಧೀಕ್ಷಕ ಅಭಿಯಂತರರು (ಪಶ್ಚಿಮ) ರವರ ಅವಗಾಹನೆಗೆ ಸಲ್ಲಿಸಿದೆ.
14) ಕಾರ್ಯಪಾಲಕ ಅಭಿಯಂತರರು (ಗೋವಿಂದರಾಜನಗರ) ವಿಭಾಗರವರಿಗೆ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.